KARNATAK UNIVERSITY, DHARWAD
ACADEMIC (S&T) SECTION
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
ವಿದ್ಯಾಮಂಡಳ (ಎಸ್&ಟಿ) ವಿಭಾಗ

ಸ್ವಾತಂತ್ರ್ಯದ ಅಮೃತ ಮಹೋತ್ಸವ

Tele: 0836-2215224
e-mail: academic.st@kud.ac.in
Pavate Nagar,Dharwad-580003
ಪಾವಟೆ ನಗರ, ಧಾರವಾಡ – 580003

NAAC Accredited
'A' Grade 2014

website: kud.ac.in


No. KU/Aca(S&T)/SSL-456/ UGCE/2023-24/0120 Date: 19/04/2024

## ಸುತ್ತೋಲೆ

ವಿಷಯ: 2023–24ನೇ ಸಾಲಿನ ಸ್ನಾತಕ ಪದವಿ ಸಮ ಸೆಮಿಸ್ಟರ್‌ಗೆ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ಕುರಿತು.

ಉಲ್ಲೇಖ:1. ಕಚೇರಿ ಸುತ್ತೋಲೆ ಸಂ. KU/Aca(S&T)/SSL-436/ UGCE/2023-24/1527, ದಿ: 09.03.2024.
2. ಕಚೇರಿ ಸುತ್ತೋಲೆ ಸಂ. KU/Aca(S&T)/SSL-436/ UGCE/2023-24/1541, ದಿ: 18.03.2024.
3. ಕಚೇರಿ ಸುತ್ತೋಲೆ ಸಂ. KU/Aca(S&T)/SSL-436/ UGCE/2023-24/1556, ದಿ: 02.04.2024.

-----

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ–3ರ ಸುತ್ತೋಲೆಯನ್ನು ಮುಂದುವರೆಸುತ್ತಾ ಈಗಾಗಲೆ ವಿದ್ಯಾರ್ಥಿಗಳ ಪ್ರವೇಶದ ಕೊನೆಯ ದಿನಾಂಕ ಮುಕ್ತಾಯಗೊಂಡಿದ್ದು, ಈಗಾಗಲೇ ಎರಡು ಬಾರಿ ದಿನಾಂಕಗಳನ್ನು ಹೆಚ್ಚಿಸಿ ವಿದ್ಯಾರ್ಥಿಗಳ ಪ್ರವೇಶಕ್ಕೆ ಅನುಕೂಲ ಮಾಡಿದಾಗಿಯೂ ಸಹಿತ ಅನೇಕ ಮಹಾವಿದ್ಯಾಲಯದಿಂದ ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಪ್ರವೇಶ ನೀಡಲು ವಿವಿಧ ಕಾರಣಗಳನ್ನು ನೀಡಿ ಒತ್ತಾಯಿಸುತ್ತಿದ್ದಾರೆ, ಆದ್ದರಿಂದ ವಿದ್ಯಾರ್ಥಿಗಳ ಭವಿಷ್ಯದ ಹಿತದೃಷ್ಟಿಯಿಂದ ಕೊನೆಯ ಬಾರಿ ಎಲ್ಲ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ವಿದ್ಯಾರ್ಥಿಗಳ ಪ್ರವೇಶದ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

ಮುಂದುವರೆದು, ಉಲ್ಲೇಖಿತ ಪತ್ರಗಳಲ್ಲಿ ನೀಡಲಾದ ಸುತ್ತೋಲೆಗಳನ್ನು ಒಳಗೊಂಡಂತೆ ಎಲ್ಲ ಸ್ನಾತಕ ಪದವಿಗಳ ಸಮ ಸೆಮಿಸ್ಟರ್ (2, 4 ಮತ್ತು 6) ಪ್ರವೇಶಕ್ಕೆ ರೂ. 650/– (ರೂ. 250/– ಪ್ರೋಸಿಸಿಂಗ್ ಶುಲ್ಕ + ರೂ. 400/– ದಂಡ) ಶುಲ್ಕದೊಂದಿಗೆ ದಿನಾಂಕ: 20.04.2024 ರಿಂದ 24.04.2024ರ ವರೆಗೆ ವಿಸ್ತರಿಸಲಾಗಿದೆ. ಹಾಗೂ ಶುಲ್ಕವನ್ನು SB Collect ಮುಖಾಂತರ ದಿನಾಂಕ: 25.04.2024 ರಂದು ಭರಿಸುವುದು ಹಾಗೂ ಪ್ರವೇಶ ಪಡೆದುಕೊಂಡ ವಿದ್ಯಾರ್ಥಿಗಳ ಯಾದಿಯನ್ನು ನಿಗದಿತ ಅನುಬಂಧದಲ್ಲಿ ಭರ್ತಿ ಮಾಡಿ ಶುಲ್ಕದ ರಶೀದಿಯೊಂದಿಗೆ ದಿನಾಂಕ: 26.04.2024ರ ಒಳಗಾಗಿ ವಿದ್ಯಾಮಂಡಳ (ಎಸ್&ಟಿ) ವಿಭಾಗಕ್ಕೆ ಸಲ್ಲಿಸುವುದು.

ಕಾರಣ, ಎಲ್ಲ ಮಹಾವಿದ್ಯಾಲಯದ ಪ್ರಾಚಾರ್ಯರುಗಳಿಗೆ, ತಮ್ಮ ಮಹಾವಿದ್ಯಾಲಯದಲ್ಲಿ ಮೇಲೆ ತಿಳಿಸಿದ ಎಲ್ಲ ಸ್ನಾತಕ ಪದವಿಗಳ ಸಮ ಸೆಮಿಸ್ಟರ್ (2, 4 ಮತ್ತು 6) ಪ್ರವೇಶ ಪಡೆಯದೇ ಉಳಿದುಕೊಂಡ ವಿದ್ಯಾರ್ಥಿಗಳ ಮಾಹಿತಿ ಪಡೆದು ಮೇಲೆ ತಿಳಿಸಿದ ಕೊನೆಯ ದಿನಾಂಕದೊಳಗಾಗಿ ಪ್ರವೇಶ ಪಡೆದುಕೊಳ್ಳಲು ಸೂಚಿಸಿ, ಪ್ರವೇಶ ಪಡೆದುಕೊಂಡ ವಿದ್ಯಾರ್ಥಿಗಳ ಯಾದಿಯನ್ನು ವಿಶ್ವವಿದ್ಯಾಲಯಕ್ಕೆ ಸಲ್ಲಿಸುವುದು ಹಾಗೂ ಮುಂದಿನ ಶೈಕ್ಷಣಿಕ ವರ್ಷದಿಂದ ವಿಶ್ವವಿದ್ಯಾಲಯದ ಶೈಕ್ಷಣಿಕ ವೇಳಪಟ್ಟಿಯ ದಿನಾಂಕ ಮುಗಿದ ನಂತರ ಯಾವುದೇ ವಿದ್ಯಾರ್ಥಿಗಳು ವಿಶ್ವವಿದ್ಯಾಲಯಕ್ಕೆ ಪ್ರವೇಶ ಬಯಸಿ ಬಂದಲ್ಲಿ ಇದಕ್ಕೆ ಸಂಬಂಧಪಟ್ಟ ಮಹಾವಿದ್ಯಾಲಯದ ಪ್ರಾಚಾರ್ಯರುಗಳು ಹೊಣೆಗಾರರಾಗುತ್ತಾರೆಂದು ಈ ಮೂಲಕ ತಿಳಿಸಲಾಗಿದೆ.

A. Channappa
ಕುಲಸಚಿವರು

ಗೆ,
ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ಬರುವ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ.
(ಕ.ವಿ.ವಿ. ಅಂತರ್ಜಾಲ ಹಾಗೂ ಮಿಂಚಂಚೆ ಮೂಲಕ ಬಿತ್ತರಿಸಲಾಗುವುದು)

**ಪ್ರತಿ:**

1. ನಿರ್ದೇಶಕರು, ಕಾಲೇಜು ಅಭಿವೃದ್ಧಿ / ವಿದ್ಯಾರ್ಥಿ ಕಲ್ಯಾಣ ವಿಭಾಗ, ಕ.ವಿ.ವಿ. ಧಾರವಾಡ.
2. ನಿರ್ದೇಶಕರು, ಐ.ಟಿ. ಶಾಖೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.
3. ನೋಡಲ್ ಅಧಿಕಾರಿಗಳು, UUCMS ಘಟಕ, ಕ.ವಿ.ವಿ. ಧಾರವಾಡ.
4. ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
5. ಕುಲಸಚಿವರ ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
6. ಕುಲಸಚಿವರು (ಮೌಲ್ಯಮಾಪನ) ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ. ಧಾರವಾಡ.
7. ಅಧೀಕ್ಷಕರು, ಪ್ರಶ್ನೆ ಪತ್ರಿಕೆ / ಗೌಪ್ಯ / ಜಿ.ಎ.ಡಿ. / ವಿದ್ಯಾಂಡಳ (ಪಿ.ಜಿ.ಪಿಎಚ್.ಡಿ) ವಿಭಾಗ, ಸಂಬಂಧಿಸಿದ ಕೋರ್ಸುಗಳ ವಿಭಾಗಗಳು ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.